# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸೋಮವಾರಪೇಟೆ ತಾಲ್ಲೂಕಿನ ಕಟ್ಟೇಪುರ ಗ್ರಾಮದ ಬಳಿ ಹೇಮಾವತಿ ನದಿಯಿಂದ ನೀರನ್ನು ಎತ್ತಿ ಹಾಸನ ಜಿಲ್ಲೆ ಅರಕಲಗೂಡು ತಾಲ್ಲೂಕಿನ ಕಸಬಾ, ಮಲ್ಲಿಪಟ್ಟಣ, ಕೋಣನೂರು, ದೊಡ್ಡಮಗ್ಗೆ ಹೋಬಳಿಯ ಗ್ರಾಮಗಳ 150 ಕೆರೆಗಳು ಹಾಗೂ 50 ಕಟ್ಟೆಗಳಿಗೆ ಕುಡಿಯುವ ನೀರಿಗಾಗಿ ತುಂಬಿಸುವ ಯೋಜನೆಯ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

***ಓದಲಾಗಿದೆ :-***

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು, ಇವರ ಪತ್ರ ಸಂಖ್ಯೆ:ಕಾನೀನಿ/ತಾಂತ್ರಿಕ-9/ಕೊಣನೂರು ಅಂದಾಜು/2018-19/3494, ದಿನಾಂಕ:16-01-2019.

***ಪ್ರಸ್ತಾವನೆ :-***

ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ಹಾಸನ ಜಿಲ್ಲೆ, ಅರಕಲಗೂಡು ತಾಲ್ಲೂಕಿನ ಕಸಬಾ, ಮಲ್ಲಿಪಟ್ಟಣ, ಕೋಣನೂರು, ದೊಡ್ಡಮಗ್ಗೆ ಹೋಬಳಿಯ ಗ್ರಾಮಗಳು ಭಾಗಶಃ ಬರಪೀಡಿತ ಪ್ರದೇಶಗಳಾಗಿದ್ದು, ಸದರಿ ಗ್ರಾಮಗಳ ರೈತರು ಆರ್ಥಿಕವಾಗಿ ಬಹಳ ಹಿಂದುಳಿದವರಾಗಿರುತ್ತಾರೆ. ಸದರಿ ಪ್ರದೇಶದಲ್ಲಿ ಒಣ ಬೆಳೆಗಳಾದ ರಾಗಿ, ಜೋಳ, ಕಡಲೆಕಾಯಿ, ರೇಷ್ಮೆ ಇತ್ಯಾದಿ ಮಳೆ ಅವಲಂಬಿತ ಬೆಳೆಗಳಾಗಿರುತ್ತವೆ ಎಂದು ವರದಿ ಮಾಡಿರುತ್ತಾರೆ.

2. ಹಾಲಿ 79 ಗ್ರಾಮಗಳಲ್ಲಿ ಕುಡಿಯುವ ನೀರಿಗಾಗಿ ತೀವ್ರ ಅಭಾವ ಉಂಟಾಗಿರುತ್ತದೆ. ಅರಕಲಗೂಡಿನ ಮಳೆ ಮಾಪನ ಕೇಂದ್ರದ ಅನುಸಾರ ಸದರಿ ಪ್ರದೇಶದಲ್ಲಿ ಮಳೆಯು ಸರಾಸರಿ ಮಟ್ಟಕ್ಕಿಂತ ಕಡಿಮೆಯಿರುತ್ತದೆ. ಸದರಿ ಪ್ರದೇಶದಲ್ಲಿ ಅಂತರ್ ಜಲ ಮಟ್ಟವು ಕುಸಿದಿರುವುದರಿಂದ ಸರ್ಕಾರದ ವತಿಯಿಂದ ಅನೇಕ ಕೊಳವೆ ಬಾವಿಗಳನ್ನು ಕೊರೆದಿದ್ದರೂ ಸಹಾ ನೀರಿನ ಅಭಾವವಿರುತ್ತದೆ. ಹಲವು ಕೊಳವೆ ಬಾವಿಗಳಲ್ಲಿ 450 ರಿಂದ 500 ಅಡಿವರೆಗೆ ಕುಡಿಯುವ ನೀರಿಗಾಗಿ ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ಎಂದು ವರದಿ ಮಾಡಿರುತ್ತಾರೆ.

3. ಮೇಲಿನ ಸಮಸ್ಯೆಗಳನ್ನು ನೀಗಿಸುವ ನಿಟ್ಟಿನಲ್ಲಿ ಸೋಮವಾರಪೇಟೆ ತಾಲ್ಲೂಕು ಕಟ್ಟೇಪುರ ಗ್ರಾಮದ ಬಳಿ ಹೇಮಾವತಿ ನದಿಯಿಂದ ನೀರನ್ನು ಎತ್ತಿ ಅರಕಲಗೂಡು ತಾಲ್ಲೂಕಿನ ಕಸಬಾ, ಮಲ್ಲಿಪಟ್ಟಣ, ಕೋಣನೂರು, ದೊಡ್ಡಮಗ್ಗೆ ಹೋಬಳಿಯ ಗ್ರಾಮಗಳ 150 ಕೆರೆ ಹಾಗೂ 50 ಕಟ್ಟೆಗಳನ್ನು ಕುಡಿಯುವ ನೀರಿಗಾಗಿ ತುಂಬಿಸುವ ಯೋಜನೆಯನ್ನು ತಯಾರಿಸಲಾಗಿರುತ್ತದೆ. ಸದರಿ ಯೋಜನೆಯ 1ನೇ ಹಂತದಲ್ಲಿ 620.07 ಎಂ.ಸಿ.ಎಫ್.ಟಿ, 60 ಕ್ಯೂಸೆಕ್ಸ್‌ನಂತೆ 120 ದಿನಗಳವರೆಗೆ ನೀರನ್ನು ಜುಲೈ ನಿಂದ ಅಕ್ಟೋಬರ್ ತಿಂಗಳವರೆಗೆ ಪಂಪ್ ಮಾಡಲು ಉದ್ದೇಶಿಸಲಾಗಿದೆ ಎಂದು ವರದಿ ಮಾಡಿರುತ್ತಾರೆ.

4. ಕಾವೇರಿ ನ್ಯಾಯಾಧೀಕರಣ ತೀರ್ಪಿನಲ್ಲಿ ಸಣ್ಣ ನೀರಾವರಿ ಕೆರೆಗಳಿಗೆ 63.83 ಟಿ.ಎಂ.ಸಿ ನೀರನ್ನು ಹಂಚಿಕೆ ಮಾಡಲಾಗಿರುತ್ತದೆ. ಈ ಯೋಜನೆಗೆ ಅಗತ್ಯ ಇರುವ 387.50 ಎಂ.ಸಿ.ಎಫ್.ಟಿ. ನೀರಿನ ಪ್ರಮಾಣವನ್ನು 63.83 ಟಿ.ಎಂ.ಸಿ ನೀರಿನಲ್ಲಿ ಬಳಕೆ ಮಾಡಲಾಗುವುದು. ಸದರಿ ಪ್ರಸ್ತಾವನೆಯು ದಿನಾಂಕ:10-01-2019 ರಂದು ನಡೆದ ಕಾವೇರಿ ನೀರಾವರಿ ನಿಗಮದ 66ನೇ ಮಂಡಳಿ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ.

5. ಈ ಹಿನ್ನೆಲೆಯಲ್ಲಿ, ಸೋಮವಾರಪೇಟೆ ತಾಲ್ಲೂಕಿನ ಕಟ್ಟೇಪುರ ಗ್ರಾಮದ ಬಳಿ ಹೇಮಾವತಿ ನದಿಯಿಂದ ನೀರನ್ನು ಎತ್ತಿ ಹಾಸನ ಜಿಲ್ಲೆ ಅರಕಲಗೂಡು ತಾಲ್ಲೂಕಿನ ಕಸಬಾ, ಮಲ್ಲಿಪಟ್ಟಣ, ಕೋಣನೂರು, ದೊಡ್ಡಮಗ್ಗೆ ಹೋಬಳಿಯ ಗ್ರಾಮಗಳ 150 ಕೆರೆಗಳು ಹಾಗೂ 50 ಕಟ್ಟೆಗಳಿಗೆ ಕುಡಿಯುವ ನೀರಿಗಾಗಿ ತುಂಬಿಸುವ ರೂ.190.00 ಕೋಟಿ ಮೊತ್ತದ ಯೋಜನೆಯ ಅಂದಾಜಿಗೆ ಆಡಳಿತಾತ್ಮಕ

ಅನುಮೋದನೆ ನೀಡುವಂತೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

6. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ : ಜಸಂಇ 11 ಎಂಎಂಕೆ 2019,**
**ಬೆಂಗಳೂರು, ದಿನಾಂಕ : 01-03-2019**

ಸೋಮವಾರಪೇಟೆ ತಾಲ್ಲೂಕಿನ ಕಟ್ಟೇಪುರ ಗ್ರಾಮದ ಬಳಿ ಹೇಮಾವತಿ ನದಿಯಿಂದ ಗರಿಷ್ಠ 387.50 ಎಂ.ಸಿ.ಎಫ್.ಟಿ. ನೀರನ್ನು ಎತ್ತಿ ಹಾಸನ ಜಿಲ್ಲೆ ಅರಕಲಗೂಡು ತಾಲ್ಲೂಕಿನ ಕಸಬಾ, ಮಲ್ಲಿಪಟ್ಟಣ, ಕೋಣನೂರು, ದೊಡ್ಡಮಗ್ಗೆ ಹೋಬಳಿಯ ಗ್ರಾಮಗಳ 150 ಕೆರೆಗಳು ಹಾಗೂ 50 ಕಟ್ಟೆಗಳಿಗೆ ಕುಡಿಯುವ ನೀರಿಗಾಗಿ ತುಂಬಿಸುವ ಒಟ್ಟಾರೆ ರೂ.190.00 ಕೋಟಿ (ರೂಪಾಯಿ ಒಂದು ನೂರಾ ತೊಂಬತ್ತು ಕೋಟಿಗಳು ಮಾತ್ರ) ಗಳ ಮೊತ್ತದ ವಿವರವಾದ ಯೋಜನಾ ಅಂದಾಜಿಗೆ ತಾತ್ವಿಕ ಅನುಮೋದನೆ ನೀಡಿದೆ ಮತ್ತು 2019-20ನೇ ಸಾಲಿನಲ್ಲಿ ಕಾಮಗಾರಿಯನ್ನು ರೂ.120.00 ಕೋಟಿಗಳ ಅಂದಾಜು ಮೊತ್ತಕ್ಕೆ ಸೀಮಿತಗೊಳಿಸಿ ಕೈಗೆತ್ತಿಕೊಳ್ಳುವ ಷರತ್ತಿಗೊಳಪಟ್ಟು ಅನುಮೋದನೆ ನೀಡಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ:ಆಇ 54 ಆಕೋ-1/2019, ದಿನಾಂಕ:15-02-2019, ರಲ್ಲಿ ನೀಡಲಾದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
01/03/19

(ಬಿ.ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ.

ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2),
ಜಲ ಸಂಪನ್ಮೂಲ ಇಲಾಖೆ,
ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, ಬೆಂಗಳೂರು.

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಗೊರೂರು.
4. ಮುಖ್ಯ ಇಂಜಿನಿಯರ್, ನೀರಾವರಿ (ದಕ್ಷಿಣ) ವಲಯ, ಮೈಸೂರು.
5. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ), ಕರ್ನಾಟಕ ಸರ್ಕಾರ (ಪ್ರಕರಣ ಸಂಖ್ಯೆ:ಸಿ-133/2019, ದಿನಾಂಕ:25-02-2019).
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.